Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in** **principal@klsvdit.edu.in**

Date: 23-07-2022

**ಪತ್ರಿಕಾ ಪ್ರಕಟಣೆ:**

# ವಿ.ತಾ.ವಿ ಬೆಳಗಾವಿಯ ರಜತ ಮಹೋತ್ಸವ ವರ್ಷದ ತಾಂತ್ರಿಕ ಉಪನ್ಯಾಸ ಮಾಲಿಕೆಯ ಉದ್ಘಾಟನೆ

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಬೆಳಗಾವಿಯ ರಜತ ಮಹೋತ್ಸವ ವರ್ಷದ ಪ್ರಯುಕ್ತ ಕೆ.ಎಲ್.ಎಸ್. ವಿ.ಡಿ.ಐ.ಟಿ. ಹಳಿಯಾಳದಲ್ಲಿ "ಇಂಡಸ್ಟ್ರಿ 4.0" ಎಂಬ ವಿಷಯದ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಜುಲೈ 23 ರಂದು ಆಯೋಜಿಸಲಾಗಿತ್ತು. ಮುಖ್ಯ ಅತಿಥಿ ಹಾಗೂ ಉಪನ್ಯಾಸಕರಾಗಿ ಆಗಮಿಸಿದ್ದ ಧಾರವಾಡದ ಟಾಟಾ ಮೋಟಾರ್ಸ್ ನ ಮುಖ್ಯಸ್ಥರಾದ ಶ್ರೀ ಅಮಿತವ್ ಶಾಹಾಯ್ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ " ಕೈಗಾರಿಕಾ ಕ್ಷೇತ್ರದಲ್ಲಾಗುತ್ತಿರುವ ಕ್ರಾಂತಿ ಇಂಡಸ್ಟ್ರಿ 4.0 ಸವಿಸ್ತಾರವಾಗಿ ವಿವರಿಸಿದರು. ಕೈಗಾರಿಕಾ ಕ್ಷೇತ್ರದಲ್ಲಾಗುತ್ತಿರುವ ನೂತನ ಬದಲಾವಣೆಗಳ ಸ್ಪಷ್ಟ ಚಿತ್ರಣ ನೀಡಿ, ವಿದ್ಯಾರ್ಥಿಗಳಿಗೆ ಕೈಗಾರಿಕಾ ಕ್ಷೇತ್ರಕ್ಕೆ ಅವಶ್ಯವಿರುವ ಕೌಶಲ್ಯ ಹೊಂದಲು ಕರೆನೀಡಿದರು. ಮಹಾವಿದ್ಯಾಲಯದ ವಿದ್ಯಾರ್ಥಿಗಳು ಟಾಟಾ ಮೋಟರ್ಸ್ ಧಾರವಾಡ ಶಾಖೆಗೆ ಭೇಟಿ ನೀಡಿ ಕೈಗಾರಿಕಾ ಕ್ಷೇತ್ರದ ಕಾರ್ಯವೈಖರಿಯ ಬಗ್ಗೆ ತಿಳಿದುಕೊಳ್ಳಲು ಅವಕಾಶ ನೀಡುವುದಾಗಿ ಇದೇ ಸಂದರ್ಭದಲ್ಲಿ ನುಡಿದರು. ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದ ಮಹಾವಿದ್ಯಾಲಯದ ಆಡಳಿತ ಮಂಡಳಿಯ ಅಧ್ಯಕ್ಷರಾದ ಶ್ರೀ ವಿನಾಯಕ ಲೋಕುರ್ ಅವರು ವಿದ್ಯಾರ್ಥಿಗಳ ತಾಂತ್ರಿಕ ಜ್ಞಾನಾಭಿವೃದ್ಧಿಗೆ ಟಾಟಾ ಮೋಟರ್ಸ್ ಧಾರವಾಡ ನೀಡುತ್ತಿರುವ ಪ್ರೋತ್ಸಾಹವನ್ನು ತುಂಬು ಮನದಿಂದ ಶ್ಲಾಘಿಸಿದರು. ವಿದ್ಯಾರ್ಥಿಗಳು ಕೈಗಾರಿಕಾ ಕ್ಷೇತ್ರದಲ್ಲಿರುವ ಸಮಸ್ಯೆಗಳಿಗೆ ಪರಿಹಾರ ನೀಡುವಂತಹ ಪ್ರಾಜೆಕ್ಟ್ ಗಳನ್ನು ನಿರ್ಮಿಸುವಂತೆ ಕರೆ ನೀಡಿದರು.

ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ವಿ.ಎ.ಕುಲಕರ್ಣಿ ಅವರು ಸ್ವಾಗತಿಸುತ್ತಾ, ವಿ.ತಾ.ವಿ ಬೆಳಗಾವಿಯ ರಜತಮಹೋತ್ಸವ ವರ್ಷದ ಅಂಗವಾಗಿ ಮಹಾವಿದ್ಯಾಲಯವು ನುರಿತ ತಾಂತ್ರಿಕ ಉಪನ್ಯಾಸಕರಿಂದ 25 ಉಪನ್ಯಾಸ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ, ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಕರೆ ನೀಡಿದರು.. ಮೆಕ್ಯಾನಿಕಲ್ ವಿಭಾಗದ ಮುಖ್ಯಸ್ಥರಾದ ಡಾ. ಕೆ.ಎಸ್.ಪೂಜಾರ್ ಮುಖ್ಯ ಅತಿಥಿಗಳ ಕಿರು ಪರಿಚಯ ನೀಡಿದರು. ಡಾ. ಮುರುಗಯ್ಯ ಬಿ ವಂದಿಸಿದರು. ಕುಮಾರ ವಿಠ್ಠಲ ನಿರೂಪಿಸಿದರು. ಮಹಾವಿದ್ಯಾಲಯದ ಡೀನ್ ಗಳು, ಎಲ್ಲಾ ವಿಭಾಗದ ಮುಖ್ಯಸ್ಥರು, ಬೋಧಕ ಸಿಬ್ಬಂದಿಗಳು ಹಾಗೂ 150ಕ್ಕೂ ಅಧಿಕ ವಿದ್ಯಾರ್ಥಿಗಳು ಮೆಕ್ಯಾನಿಕಲ್ ವಿಭಾಗವು ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಪ್ರಾಂಶುಪಾಲರು

Principal
KLS Vishwanathrao Deshpande Institute of Technology, Haliyal


KLS VDIT
25
Silver Jubilee
VTU
TECHNICAL TALKS @ VDIT
Inauguration & Talk by
Shri. AMITAV SAHAY
TATA MOTORS
Topic: Industry 4.0
KLS
VDIT
15-16/54/170
VDIT/2015-16/54/05
2015-16/54/158


KLS VDIT
25
Silver Jubilee year of VTU
TECHNICAL TALKS @ VDIT
Inauguration & Talk by
Shri. AMITAV SAHAY
TATA MOTORS
Topic: Industry 4.0
KLS
VDIT




Shri. Vinayak Lokur